M – 2022

Register Number :

Subject Code : 01 (NS)

# KANNADA

Time : 3 Hours 15 Minutes] [Total No. of questions : 70] [Max. Marks : 100

## ಅ – ವಿಭಾಗ

I. ಈ ಕೆಳಗಿನ **ಯಾವುದಾದರೂ ಹತ್ತು** ಪ್ರಶ್ನೆಗಳಿಗೆ ಒಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. **(10 × 1 = 10)**

1) ಬಸವಣ್ಣನವರ ವಚನಗಳ ಅಂಕಿತ ಯಾವುದು?

2) ಪಾಂಚಾಲನಂದನೆ ಎಂದು ಯಾರನ್ನು ಕರೆಯಲಾಗಿದೆ?

3) ಯಾವ ಮಾತಿಗೆ ಕೊನೆಯಿಲ್ಲವೆಂದು ಪುರಂದರದಾಸರು ಹೇಳಿದ್ದಾರೆ?

4) ಬ್ಯಾಸಗಿ ದಿವಸಕ್ಕೆ ಯಾವ ಮರ ತಂಪು?

5) ಜೀಸಸ್‌ನ ಶಿಲುಬೆಗೇರಿಸಿದವರು ಯಾರ ವಕಾಲತ್ತು ನಡೆಸಿದವರಾಗಿದ್ದಾರೆ?

6) ಬಸಲಿಂಗ ವೈದ್ಯರಿಗಾಗಿ ಅಲೆದಾಗ ಜೊತೆಗಿದ್ದ ರಾಜಕಾರಣಿ ಯಾರು?

7) ಮಾರ್ಷ್ ಮೊದಲು ಯಾವ ಆದಿವಾಸಿಯೊಂದಿಗೆ ಸ್ನೇಹ ಸಂಪಾದಿಸಿದನು?

8) ಲೇಖಕಿಯ ಪತಿಯನ್ನು 'ಸೋನಗ್ರಫಿ' ರೂಮಿಗೆ ಕರೆದೊಯ್ದುದೇಕೆ?

9) ತಮ್ಮ ರಾಜ್ಯದಲ್ಲಿ ತಾವೇ ತಬ್ಬಲಿಗಳಾಗುತ್ತಿರುವವರು ಯಾರು?

P.T.O.

https://www.karnatakaboard.com

10) ಕಲಾಂ 'ಮಗುವೇ ಮೊದಲ ವಿಜ್ಞಾನಿ' ಎಂದಿದ್ದಾರೆ. ಏಕೆ?

11) ದುರ್ಗಪ್ಪ ಏನನ್ನು ಕೇಳಿ ಪಡೆಯಲು ಬಂದಿದ್ದನು?

12) ಕೃಷ್ಣೇಗೌಡನ ಆನೆ ಮೊದಲು ಯಾವ ಮಠದಲ್ಲಿತ್ತು?

13) ರಹಮಾನ್ 'ಐ ವಿಟ್ನೆಸ್' ಎಂದು ಯಾರನ್ನು ತೋರಿಸಿದನು?

14) ವೆಟರ್ನರಿ ಸ್ಟಾಕ್‌ಮನ್‌ನ ಹೆಸರೇನು?

15) ಆನೆಶಾಸ್ತ್ರದವನು ಏನೆಂದು ಭವಿಷ್ಯ ನುಡಿದಿದ್ದನು?

**ಆ – ವಿಭಾಗ**

II. (ಅ) ಈ ಕೆಳಗಿನ **ಯಾವುದಾದರೂ ನಾಲ್ಕು** ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. **(4 × 2 = 8)**

16) ರಾವಣನು ತನ್ನ ಅಂತಃಪುರದ ಸ್ತ್ರೀಯರನ್ನು ಹೇಗೆ ಸಂತೈಸಿದನು?

17) ಸೂರ್ಯ ಮತ್ತು ದೀಪಗಳಿಂದಾಗುವ ಉಪಯೋಗಗಳಾವುವು?

18) ಗಂಡರ್ರೈವರು ಮೂರು ಲೋಕದ ಗಂಡರಾರು? ಹೆಸರಿಸಿ.

19) ರಾಜ ಮತ್ತು ಮಂತ್ರಿಗಳಿಗೆ ಯಾವ ಅರ್ಹತೆಗಳಿರಬೇಕೆಂದು ಸೋಮನಾಥನು ಹೇಳಿದ್ದಾನೆ?

20) ಹಿತ್ತಾಳೆಗಿಂತ ಬಲುಹೀನ ಯಾವುದು?

21) ಕ್ರಿಸ್ಮಸ್ ಮನೆಗೆ ಏನನ್ನು ಹೊತ್ತು ತಂದಿದೆ?

https://www.karnatakaboard.com

(ಆ) ಈ ಕೆಳಗಿನ **ಯಾವುದಾದರೂ ಮೂರು** ಪ್ರಶ್ನೆಗಳಿಗೆ **ಎರಡು–ಮೂರು** ವಾಕ್ಯಗಳಲ್ಲಿ ಉತ್ತರಿಸಿ. **(3 × 2 = 6)**

22) ಹೆಂಡ್ತಿ ಸಿದ್ಲಿಂಗಿ ಏನು ಹೇಳುತ್ತಲೇ ಇದ್ದಳು?

23) ಸಿಂಹ ಬಾಲದ ಕೋತಿಗಳಿಗೆ ಒದಗಿದ ತೊಂದರೆ ಏನು?

24) ಮುದ್ದೇಗೌಡರು ಪಥ್ಯದ ವಿಚಾರವಾಗಿ ಹೊಂದಿದ್ದ ನಿಲುವು ಯಾವುದು?

25) ತ್ರಿಭಾಷಾ ಸೂತ್ರದ ಬಳಕೆ ಹೇಗಿರಬೇಕು?

26) ಕಲಾಂ ಅವರ ದೃಷ್ಟಿಯಲ್ಲಿ ಕನಸುಗಳು ಏನಾಗುತ್ತವೆ?

(ಇ) ಈ ಕೆಳಗಿನ **ಯಾವುದಾದರೂ ಮೂರು** ಪ್ರಶ್ನೆಗಳಿಗೆ **ಎರಡು–ಮೂರು** ವಾಕ್ಯಗಳಲ್ಲಿ ಉತ್ತರಿಸಿ. https://www.karnatakaboard.com **(3 × 2 = 6)**

27) ಮಠದವರಿಗೆ ಆನೆಗಿಂತ ವೇಲಾಯುಧನನ್ನು ಸಾಕಲು ತ್ರಾಸಾದುದೇಕೆ?

28) ಡ್ರೈವರ್‌ನ ತಲೆ ಜಜ್ಜಿ ಹೋದದ್ದು ಹೇಗೆ? ಆನೆ ಅದಕ್ಕೆ ಕಾರಣವೇ?

29) ಹುಚ್ಚು ನಾಯಿಗಳು ಆಸ್ಪತ್ರೆಯಲ್ಲಿ ಹೇಗೆ ವರ್ತಿಸುತ್ತವೆಂದು ಪುಟ್ಟಯ್ಯ ಹೇಳಿದನು?

30) ಆನೆಯೇ ತಿಪ್ಪಣ್ಣನ ಸಾವಿಗೆ ಕಾರಣವೆಂದು ದುರ್ಗಪ್ಪ ಹೇಳಿದಾಗ ನಿರೂಪಕರ ಪ್ರತಿಕ್ರಿಯೆ ಏನು?

31) ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದ್ದ?

https://www.karnatakaboard.com

## ಇ – ವಿಭಾಗ

III. (ಅ) ಈ ಕೆಳಗಿನ **ಯಾವುದಾದರೂ ಎರಡು** ವಾಕ್ಯಗಳ ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ. **(2 × 3 = 6)**

32) ಉದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ.

33) ಕಲಿಭೀಮನೇ ಮಿಡುಕುಳ್ಳ ಗಂಡನು.

34) ಕುಸುಮ ವಾಸನೆಯಿಲ್ಲ ಕೂಡಲು ಸ್ಥಳವಿಲ್ಲ.

35) ಜ್ಯೋತಿ ನಿನ್ನ್ಯಾರ ಹೋಲರ.

(ಆ) ಈ ಕೆಳಗಿನ **ಯಾವುದಾದರೂ ಒಂದು** ವಾಕ್ಯದ ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ. **(1 × 3 = 3)**

36) ಒಂದೊಂದು ಭಾಷೆಯೂ ಒಂದೊಂದು ವರ.

37) ಅದಕ್ಕೂ ಚಿನ್ನಮ್ಮನ ಪುಟ್ಟ ಸಂಸಾರದ ಬಗ್ಗೆ ಅದೆಷ್ಟು ಪ್ರೀತಿ ವಾತ್ಸಲ್ಯ.

38) ಮಿ. ಪ್ರೆಸಿಡೆಂಟ್ ನಿಮ್ಮ ಯಶಸ್ಸಿನ ಗುಟ್ಟೇನು?

(ಇ) ಈ ಕೆಳಗಿನ **ಯಾವುದಾದರೂ ಒಂದು** ವಾಕ್ಯದ ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ. **(1 × 3 = 3)**

39) ಆನೆ ಸಾಕುವುದು ಎಂದರೆ ಎಲೆಕ್ಷನ್ನಿಗೆ ನಿಂತ ಹಾಗೆ.

40) ನಿನ್ನ ಮುಕಾರೇನಿದ್ರೂ ಬರ್ವಣಿಗೇಲಿ ಇರಬೇಕು.

41) ಕಂಬದ ಮೇಲೆ ಯಾಕೋ ಕೈಲಾಸ ಕಂಡ ಹಾಗೆ ಇದೆಯಲ್ಲಾ.

https://www.karnatakaboard.com

## ಈ – ವಿಭಾಗ

IV. (ಅ) ಈ ಕೆಳಗಿನ **ಯಾವುದಾದರೂ ಮೂರು** ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. **(3 × 4 = 12)**

42) ರಕ್ಷಿಸಬೇಕಾದವರೆ ಭಕ್ಷಕರಾದರೆ ಒದಗುವ ವಿಘಟನೆಯನ್ನು ಬಸವಣ್ಣನವರು ಹೇಗೆ ಚಿತ್ರಿಸಿದ್ದಾರೆ?

43) ದ್ರೌಪದಿಯು ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿ.

44) ಯಾವ ಯಾವ ಸಂಗತಿಗಳನ್ನು ಉಪೇಕ್ಷಿಸಬಾರದಾಗಿ ಸೋಮನಾಥನು ತಿಳಿಸಿದ್ದಾನೆ?

45) ಮುಂಬೈ ಜಾತಕದಲ್ಲಿ ತಂದೆ ತಾಯಿಗಳು ಮಗುವಿಗೆ ಗೋಚರಿಸುವ ಬಗೆಯನ್ನು ವಿವರಿಸಿ.

46) ಯಾವ ಸ್ಥಳಗಳಲ್ಲಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ? ಚರ್ಚಿಸಿ.

(ಆ) ಈ ಕೆಳಗಿನ **ಯಾವುದಾದರೂ ಎರಡು** ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. **(2 × 4 = 8)**

47) ಬಸಲಿಂಗ ಎದುರಿಸುತ್ತಿದ್ದ ಸಮಸ್ಯೆಗಳು ಯಾವುವು?

48) ವಾಲ್‌ಪರ್ಯೆಗೆ ಬಂದ ಮಾರ್ಷ್ ಅಲ್ಲಿ ಹೇಗೆ ನೆಲೆಯೂರಿದ? ವಿವರಿಸಿ.

49) ಸೀತಾ ಎಂಬ ಗೆಳತಿಯ ಗುಣಸ್ವಭಾವಗಳನ್ನು ಲೇಖಕಿ ಹೇಗೆ ಚಿತ್ರಿಸಿದ್ದಾರೆ?

50) ಚಿನ್ನಮ್ಮ ಬೆಳ್ಳಿ ಲೋಟವನ್ನು ಮತ್ತೆ ಹೊಳೆಗೆ ಎಸೆಯಲು ಕಾರಣವೇನು?

https://www.karnatakaboard.com

(ಇ) ಈ ಕೆಳಗಿನ **ಯಾವುದಾದರೂ** ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. **(2 × 4 = 8)**

51) ನಿರೂಪಕರು ಕೊಡಲಿ ವಸೂಲಿ ಮಾಡಲು ಹೋಗಲಿಲ್ಲವೇಕೆ? ವಿವರಿಸಿ.

52) ಬೀದಿ ನಾಯಿಗಳ ನಿವಾರಣೆಗೆ ಖಾನ್ ಸಾಹೇಬರು ತೆಗೆದುಕೊಂಡಿದ್ದ ಕ್ರಮಗಳಾವುವು?

53) ಡ್ರೈವರ್ ಅಬ್ಬಾಸ್ ಮತ್ತು ಕ್ಲೀನರ್ ಕೃಷ್ಣನ ಸಾವಿಗೆ ಕೃಷ್ಣೇಗೌಡರ ಆನೆ ಕಾರಣವೇ? ವಿವರಿಸಿ.

54) ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು?

**ಉ – ವಿಭಾಗ**

V. ಈ ಕೆಳಗಿನ **ಯಾವುದಾದರೂ ಒಂದು** ಪದ್ಯದ ಭಾವಾರ್ಥವನ್ನು ಬರೆಯಿರಿ. **(1 × 5 = 5)**

55) ಪೊಸಗಾರ ಸಿಡಿಲ ಮಸಕಮ
ನಸಕಟಿದು ಕೃತಾಂತಜಿಹ್ವೆ ಪೊಡಕರಿಸುವ ವೋಲ್
ಬೆಸಸು ಬೆಸಸೆಂದು ಕರಮ
ರ್ವಿಸಿ ಸನ್ನಿದವಾಯ್ತು ವಿದ್ಯೆ ರಾವಣನಿದಿರೊಳ್.

56) ಏಳು ಚಿನ್ನ, ಬೆಳಗಾಯ್ತು ಅಣ್ಣ, ಮೂಡಲವು ತೆರೆಯೆ ಕಣ್ಣ
ನಕ್ಷತ್ರ ಜಾರಿ, ತಮವೆಲ್ಲ ಸೋರಿ, ಮಿಗಿಲಹುದು ಬಾನಬಣ್ಣ
ಜೇನ್ನೊಣದ ಹೆದೆಗೆ, ಹೂಬಾಣ ಹೂಡಿ, ಝುಂ ಎಂದು ಬಿಟ್ಟ ಮಾರ
ಗುಡಿಗೋಪುರಕ್ಕು, ಬಲೆಬೀಸಿಬಂದ, ಅಗೊ ಬೆಳಕು–ಬೇಟೆಗಾರ.

https://www.karnatakaboard.com

## ಭಾಷಾಭ್ಯಾಸ

VI. (ಅ) ಈ ಕೆಳಗಿನ **ಯಾವುದಾದರೂ ಆರಕ್ಕೆ** ಸೂಚನೆಗೆ ಅನುಗುಣವಾಗಿ ಉತ್ತರಿಸಿ.

**(6 × 2 = 12)**

57) ಈ ಕೆಳಗಿನ ಯಾವುದಾದರೂ ಎರಡು ಪದಗಳ ಅರ್ಥ ಬರೆಯಿರಿ.

ಧುರ, ಉದಕ, ವ್ರಜ, ತ್ರಾಸ

58) ಈ ಕೆಳಗಿನ ಯಾವುದಾದರೂ ಎರಡು ಪದಗಳಿಗೆ ನಾನಾರ್ಥಗಳನ್ನು ಬರೆಯಿರಿ.

ಅರಿ, ನೆರೆ, ಕಲಿ, ಅರಸು

59) ಈ ಕೆಳಗಿನ ಯಾವುದಾದರೂ ಎರಡು ಪದಗಳ ಧಾತುರೂಪಗಳನ್ನು ಬರೆಯಿರಿ.

ತಿಂದಿತು, ಮಲಗಿದನು, ಸೋತರು, ಹಾಡಿದಳು

60) ಈ ಕೆಳಗಿನ ಯಾವುದಾದರೂ ಎರಡು ಪದಗಳಿಗೆ ತತ್ಸಮಗಳನ್ನು ಬರೆಯಿರಿ.

ದಿಟ್ಟಿ, ಸಂಜೆ, ಆಗಸ, ರಾಯ

61) ಯಾವುದಾದರೂ ಎರಡು ಅನ್ಯದೇಶ್ಯ ಪದಗಳನ್ನು ಬರೆಯಿರಿ.

62) ಈ ಕೆಳಗಿನ ಯಾವುದಾದರೂ ಎರಡು ಪದಗಳ ಗುಣವಾಚಕಗಳನ್ನು ಬರೆಯಿರಿ.

ನಳಿನಾನನೆ, ದೊಡ್ಡ ಮರ, ಉಗ್ರಕೋಪ, ದುರ್ಜನ

https://www.karnatakaboard.com

63) ಈ ಕೆಳಗಿನ ಯಾವುದಾದರೂ ಎರಡು ಪದಗಳ ವಿಭಕ್ತಿ ಪ್ರತ್ಯಯಗಳನ್ನು ಹೆಸರಿಸಿ.

ನೋವಿನಲ್ಲಿ, ಮನೆಯಿಂದ, ಬಸಲಿಂಗನಿಗೆ, ನಡೆಸಿದವಳು

64) ಈ ಕೆಳಗಿನ ಯಾವುದಾದರೂ ಎರಡು ನುಡಿಗಟ್ಟುಗಳನ್ನು ಸ್ವಂತ ವಾಕ್ಯದಲ್ಲಿ ಬಳಸಿರಿ.

ಕಂಬಿಕೀಳು, ಮೊರೆಯಿಡು, ಕೈತೊಳೆದುಕೊಳ್ಳು, ತಲೆಬಾಗು

**(ಆ)** ಈ ಕೆಳಗಿನ **ಯಾವುದಾದರೂ ಒಂದನ್ನು** ಕುರಿತು ಪ್ರಬಂಧವನ್ನು ಬರೆಯಿರಿ. **(1 × 5 = 5)**

65) ಜಲ ಸಂರಕ್ಷಣೆ.

66) ತ್ಯಾಜ್ಯ ವಸ್ತುಗಳ ಮರುಬಳಕೆ.

(ಇ) ಈ ಕೆಳಗಿನ **ಯಾವುದಾದರೂ ಒಂದನ್ನು** ಕುರಿತು ಪತ್ರ ಬರೆಯಿರಿ. **(1 × 4 = 4)**

67) ಅಂಕಪಟ್ಟಿ ಮತ್ತು ವರ್ಗಾವಣೆ ಪತ್ರವನ್ನು ಕೋರಿ ನಿಮ್ಮ ಕಾಲೇಜಿನ ಪ್ರಾಂಶುಪಾಲರಿಗೊಂದು ಪತ್ರ ಬರೆಯಿರಿ.

68) ನಿಮ್ಮ ಕಾಲೇಜಿನಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯನ್ನು ಕುರಿತು ನಿಮ್ಮ ಗೆಳೆಯ/ಗೆಳತಿಗೊಂದು ಪತ್ರ ಬರೆಯಿರಿ.

**(ಈ)** ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ. **(1 × 4 = 4)**

69) ತುಂಬಿದ ಕೊಡ ತುಳುಕುವುದಿಲ್ಲ.

70) ದೇಶ ಸುತ್ತಬೇಕು; ಕೋಶ ಓದಬೇಕು.

**https://www.karnatakaboard.com**
**Whatsapp @ 9300930012**
**Send your old paper & get 10/-**
अपने पुराने पेपर्स भेजे और 10 रुपये पायें,
**Paytm or Google Pay से**

https://www.karnatakaboard.com